ಅ) 2000-01ನೇ ಸಾಲಿನಲ್ಲಿ ಕಾಮಗಾರಿ ಕಾರ್ಯಗಳಿಗೆ ಖರ್ಚು ಮಾಡಿರುವ ಹಣದ ಬಗ್ಗೆ ವಿವರಣಾ ಪಟ್ಟಿಯನ್ನು ಲಗತ್ತಿಸಲಾಗಿದೆ (ಅಡಕ-ಅ). ಕ್ಷೇತ್ರವಾರು ಹಣ ಮಂಜೂರು ಮಾಡುವ ಪದ್ಧತಿ ಮಂಡಲಿಯಲ್ಲಿಲ್ಲ. ಅಗತ್ಯಕ್ಕೆ ಅನುಗುಣವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಆ) ಮೇಲೆ ತಿಳಿಸಿರುವ ಎಲ್ಲಾ ಕಾಮಗಾರಿಗಳನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ.

ರಾಜ್ಯದಲ್ಲಿ ವಿದ್ಯುತ್ ಪ್ರಸರಣಾ ಇಲಾಖೆಯಲ್ಲಿ ನೌಕರರ ಸಂಖ್ಯೆ

5067 - ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯುತ್ ಪ್ರಸರಣಾ ಇಲಾಖೆಯ ಒಟ್ಟು ಅಧಿಕಾರಿ/ನೌಕರರ ಸಂಖ್ಯೆ ಎಷ್ಟು? ಇವರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿರುವ ನೌಕರರ ಸಂಖ್ಯೆ ಎಷ್ಟು?

ಆ) ನಿಗಮದಲ್ಲಿ ಇದುವರೆಗೂ ನಡೆಸಲಾಗಿರುವ ನೇಮಕಾತಿ ಪ್ರಕ್ರಿಯೆಗಳಲ್ಲಿ ಮೀಸಲಾತಿ ನೀತಿ ಅನುಸರಿಸಲಾಗಿದೆಯೇ? ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ವೀರಕುಮಾರ ಅ. ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ರಾಜ್ಯದ ವಿದ್ಯುತ್ ಪ್ರಸರಣಾ ನಿಗಮದಲ್ಲಿ ಒಟ್ಟು 40442 ಮಂದಿ ಅಧಿಕಾರಿ/ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ, ಈ ಪೈಕಿ ಪರಿಶಿಷ್ಟ ಜಾತಿಯ 6531 ಹಾಗೂ ಪರಿಶಿಷ್ಟ ಪಂಗಡದ 1373 ಅಧಿಕಾರಿ/ನೌಕರರಿರುತ್ತಾರೆ. ವಿವರಗಳು ಕೆಳಕಂಡಂತೆ ಇವೆ;

ಕ್ರ.ಸಂ.	ಗ್ರೂಪ್	ಒಟ್ಟು	ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ
1.	ಗ್ರೂಪ್-ಎ	1786	216	45
2.	ಗ್ರೂಪ್-ಬಿ	1370	91	30
3.	ಗ್ರೂಪ್-ಸಿ	19270	2762	606
4.	ಗ್ರೂಪ್-ಡಿ	18016	3462	692
	ಒಟ್ಟು	**40442**	**6531**	**1373**

ಆ) ಹೌದು, ಅನುಸರಿಸಲಾಗಿದೆ.

ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳು

5068 - ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ತುರುವೇಕೆರೆ) : ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)